# ಆಡಳಿತಯಂತ್ರಕ್ಕೆ ಚುರುಕು ಮುಟ್ಟಿಸಿದ ಸಿಎಂ

## ವಿಧಾನಸೌಧ ಕಚೇರಿಗೆ ದಿಢೀರ್ ಭೇಟಿ | ತಡವಾಗಿ ಬರುವ ನೌಕರರಿಗೆ ತರಾಟೆ | ಕ್ರಮದ ಎಚ್ಚರಿಕೆ



ಸರ್ಕಾರಿ ಕಚೇರಿಯಲ್ಲಿ ಸಿಎಂ ಪರಿಶೀಲನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನೂತನ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಿದ್ದು, ನಿಗದಿತ ಸಮಯಕ್ಕೆ ಕಚೇರಿಗೆ ಆಗಮಿಸದ ಸಿಬ್ಬಂದಿ ವಿರುದ್ಧ ನಿರ್ದಾಕ್ಷಿಣ್ಯ ಶಿಸ್ತು ಕ್ರಮ ಜರುಗಿಸುವುದಾಗಿ ಖಡಕ್ ಎಚ್ಚರಿಕೆ ನೀಡಿದ್ದಾರೆ. ಗುರುವಾರ ಬೆಳಗ್ಗೆ ವಿಧಾನಸೌಧದ ನೆಲಮಹಡಿಯಲ್ಲಿರುವ ಸ್ವೀಕೃತಿ ಮತ್ತು ರವಾನೆ ಶಾಖೆಗೆ ದಿಢೀರ್ ಭೇಟಿ ನೀಡಿದ ಅವರು ಪರಿಶೀಲನೆ ನಡೆಸಿದರು.

ಸರ್ಕಾರಿ ಕೆಲಸದ ವೇಳೆಯಲ್ಲಿ ಎಲ್ಲ ಸಿಬ್ಬಂದಿ, ಅಧಿಕಾರಿಗಳು ಕಡ್ಡಾಯವಾಗಿ ಕಚೇರಿಯಲ್ಲಿ ಹಾಜರಿರಬೇಕು. ಅಶಿಸ್ತು ತೋರುವ ಅಧಿಕಾರಿ, ಸಿಬ್ಬಂದಿಯನ್ನು ಸಹಿಸುವುದಿಲ್ಲ. ಸಿಬ್ಬಂದಿಯಲ್ಲಿ ಸಮಯ ಪಾಲನೆ ಇಲ್ಲದಿದ್ದರೆ ಹೇಗೆ ಕರ್ತವ್ಯ ನಿರ್ವಹಿಸುತ್ತೀರಿ? ಈ ಮೊದಲು ಯಾವ ರೀತಿಯಲ್ಲಿ ಕೆಲಸ ಮಾಡುತ್ತಿದ್ದಿರಿ ಎಂಬುದು ಗೊತ್ತಿಲ್ಲ. ಆದರೆ, ನಾನು ಮುಖ್ಯಮಂತ್ರಿಯಾಗಿರುವಾಗ ನಿಗದಿತ ಸಮಯಕ್ಕೆ ಬಂದು ಕೆಲಸ ಮಾಡಬೇಕು. ಅಧಿಕಾರಿಗಳು ಸೇರಿದಂತೆ ಕೆಳಹಂತದ ಸಿಬ್ಬಂದಿ ಶಿಸ್ತು ಪಾಲಿಸಬೇಕು. ಶಿಸ್ತು ಇಲ್ಲದಿದ್ದರೆ ಬೇರೆಯವರು ಪಾಲನೆ ಮಾಡಲಿದ್ದಾರೆಯೇ ಎಂದು ಖಾರವಾಗಿ ಪ್ರಶ್ನಿಸಿದರು.

ಇನ್ನು ಮುಂದೆ ಪದೇ ಪದೇ ದಿಢೀರ್ ಭೇಟಿ ನೀಡುವ ಮೂಲಕ ಸಿಬ್ಬಂದಿಯ ಕಾರ್ಯವೈಖರಿಯನ್ನು ಗಮನಿಸುತ್ತೇನೆ. ಇಂತಹ ಪ್ರಮಾದಗಳು ಆಗದಂತೆ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು. ಒಂದು ಹಂತಕ್ಕೆ ಯಡಿಯೂರಪ್ಪ ಅವರು ಸಿಬ್ಬಂದಿಯ ವರ್ತನೆಯಿಂದ ಕೆಂಡಾಮಂಡಲರಾದರು.

# ವಂಚನೆ ಪ್ರಕರಣಕ್ಕೆ ಬ್ರೇಕ್ ಹಾಕಿ

## ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಿ: ಪೊಲೀಸರಿಗೆ ಸಿಎಂ ಸೂಚನೆ



ಬೆಂಗಳೂರು: ರಾಜ್ಯದಲ್ಲಿ ಅಮಾಯಕರನ್ನು ವಂಚನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಪೊಲೀಸ್ ಅಧಿಕಾರಿಗಳಿಗೆ ಗುರುವಾರ ಸೂಚನೆ ನೀಡಿದ್ದಾರೆ. ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ಅವರು ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿ ಪೊಲೀಸ್ ಅಧಿಕಾರಿಗಳ ಜತೆ ಚರ್ಚೆ ನಡೆಸಿದರು.

ರಾಜಧಾನಿ ಬೆಂಗಳೂರಿನ ಬಗ್ಗೆ ಇಡೀ ಜಗತ್ತು ಗಮನ ಹರಿಸುತ್ತದೆ. ನಗರದಲ್ಲಿ ಅಕ್ರಮ ಚಟುವಟಿಕೆಗಳು ನಡೆಯದಂತೆ ನಿಗಾ ವಹಿಸಬೇಕು. ಆಧುನಿಕ ತಂತ್ರಜ್ಞಾನ ಬಳಸಿ ನಡೆಯುವ ಅಪರಾಧ ಪ್ರಕರಣಗಳನ್ನು ತಡೆಗಟ್ಟಬೇಕು. ಅಪರಾಧ ಪ್ರಕರಣಗಳನ್ನು ತಗ್ಗಿಸುವ ನಿಟ್ಟಿನಲ್ಲಿ ರಾತ್ರಿ 8ರಿಂದ ಬೆಳಗ್ಗೆ 6 ಗಂಟೆವರೆಗೆ ಗಸ್ತು ತಿರುಗುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

ಇತ್ತೀಚೆಗೆ ಬೆಂಗಳೂರಿನಲ್ಲಿ ಶಂಕಿತ ಭಯೋತ್ಪಾದಕರು ಆಶ್ರಯ ಪಡೆದಿರುವ ಬಗ್ಗೆ ಪ್ರಸ್ತಾಪಿಸಿರುವ ಮುಖ್ಯಮಂತ್ರಿಗಳು ಭಯೋತ್ಪಾದಕರ ಬಗ್ಗೆ ಎಚ್ಚರ ವಹಿಸಿ, ಮಹಿಳೆಯರ ಸುರಕ್ಷತೆಗೆ ಆದ್ಯತೆ ನೀಡಬೇಕು. ರಾಜ್ಯದಲ್ಲಿ ಕೋಮುಗಲಭೆ ಸಂಭವಿಸದಂತೆ ಎಚ್ಚರ ವಹಿಸಬೇಕು. ಕೋಮುಗಲಭೆಗಳಿಗೆ ಪ್ರಚೋದನೆ ನೀಡುವವರು ಯಾರೇ ಇರಲಿ, ಅಂಥವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕೈಗೊಳ್ಳುವಂತೆ ತಾಕೀತು ಮಾಡಿದ್ದಾರೆ. ಎಲ್ಲ ಧರ್ಮದವರು ಯಾವುದೇ ಅಡ್ಡಿ–ಆತಂಕಗಳಿಲ್ಲದೇ ತಮ್ಮ–ತಮ್ಮ ಹಬ್ಬ ಆಚರಿಸಬೇಕು. ಹಬ್ಬದ ದಿನಗಳಲ್ಲಿ ವಿಶೇಷವಾದ ಪೊಲೀಸ್ ಭದ್ರತೆ ನೀಡುವಂತೆ ಸೂಚಿಸಿದ್ದಾರೆ ಎನ್ನಲಾಗಿದೆ. ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ 25,174 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು ಎಂದು ಸಿಎಂ ತಿಳಿಸಿದರು.

2